ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ಸಂಖ್ಯೆ: ವಾಇ : ಸುಮಪ : ಪ ಪ್ರ : 2014–15 : ಅಕ್ಟೋಬರ್ 21 , 2014

# ದೀಪಾವಳಿ : ರಾಜ್ಯದ ಜನತೆಗೆ ಮುಖ್ಯಮಂತ್ರಿ ಶುಭಾಶಯ



ಬೆಂಗಳೂರು, ಅಕ್ಟೋಬರ್ 21 :

ಬೆಳಕಿನ ಹಬ್ಬ ದೀಪಾವಳಿಯ ಸಂದರ್ಭದಲ್ಲಿ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ರಾಜ್ಯದ ಜನತೆಗೆ ಶುಭ ಹಾರೈಸಿದ್ದಾರೆ.

ದೀಪಾವಳಿಯು ನಮ್ಮನ್ನು ಅಜ್ಞಾನದಿಂದ ಜ್ಞಾನದೆಡೆಗೆ, ಮೌಢ್ಯದಿಂದ ವೈಚಾರಿಕತೆಯೆಡೆಗೆ, ಕ್ರೌರ್ಯದಿಂದ ಮಾನವೀಯತೆಯಡೆಗೆ ಹಾಗೂ ಕತ್ತಲಿನಿಂದ ಬೆಳಕಿನೆಡೆಗೆ ಕೊಂಡೊಯ್ಯಲಿ. ಮಕ್ಕಳು, ಮಹಿಳೆಯರು, ವೃದ್ಧರು ಮತ್ತು ರೋಗಿಗಳನ್ನು ಘಾಸಿಗೊಳಿಸುವ ಹಾಗೂ ವಾಯು ಮಾಲಿನ್ಯ ಮತ್ತು ಶಬ್ದ ಮಾಲಿನ್ಯಕ್ಕೆ ಕಾರಣವಾಗುವ ಪಟಾಕಿಗಳ ಬಳಕೆ ಕಡಿಮೆಯಾಗಲಿ. ನಾಡಿನೆಲ್ಲೆಡೆ ಅಭಿವೃದ್ಧಿ ಮತ್ತು ಸಮೃದ್ಧಿ ಪಸರಿಸಲಿ ಎಂದು ಶ್ರೀ ಸಿದ್ದರಾಮಯ್ಯ ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

*************

ಡಿ ಪಿ ಎಂ